# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

KANNADA POST

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನ ಪತ್ರಿಕೆ    Kannada Daily

ಹಾಸನ    E-mail : kannadapostnews@gmail.com    / ಕನ್ನಡ post    Price: ₹1

Vol.No.01 | Issue. 171 | Pages. 2 | Date: 14-05-2025, WEDNESDAY    RNI NO: KARKAN/2024/89601

ಸಂಪುಟ : 01 - ಸಂಚಿಕೆ : 171 - ಪುಟಗಳು : 2 - 14 ಮೇ 2025 ಬುಧವಾರ    Ph: 8762954248    ದರ : ₹1


# ಅನುಕರಣೆ ಸಲ್ಲ-ನಮ್ಮ ಪರಂಪರೆಯೇ ಎಲ್ಲ: ಈಶ್ವರ್ ಖಂಡ್ರೆ

## ಶ್ರೀ ವೀರಭದ್ರಸ್ವಾಮಿ ದೇಗುಲ ದಶಮಾನೋತ್ಸವ | ವಿವಿಧ ಮಠಾಧೀಶರು ಭಾಗಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಬೇಲೂರು: ಪಾಶ್ಚಾತ್ಯರ ಅನುಕರಣೆಯನ್ನು ಬಿಟ್ಟು, ನಮ್ಮ ಪ್ರಾಚೀನ ಶ್ರೀಮಂತ ಪರಂಪರೆಯನ್ನು ಯುವಜನರು ಎತ್ತಿ ಹಿಡಿಯಬೇಕು ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ಸಲಹೆ ನೀಡಿದರು.

ಹಳೇಬೀಡು ಹೋಬಳಿ ಗೋಣಿಸೋಮನಹಳ್ಳಿಯ ಶ್ರೀ ಹುಲಿಕಲ್ಲು ವೀರಭದ್ರೇಶ್ವರಸ್ವಾಮಿ ದೇವಸ್ಥಾನದ ದಶಮಾನೋತ್ಸವ ಸಮಾರಂಭದಲ್ಲಿ ಮಂಗಳವಾರ ಮಾತನಾಡಿ, ಕರುನಾಡನ್ನಾಳಿದ ಹೊಯ್ಸಳರು ಶಿಲೆಯಲ್ಲಿ ಕಲೆಯನ್ನು ಅರಳಿಸಿದ್ದಾರೆ.

ಕಲಾಪರಂಪರೆಗೆ ದೊಡ್ಡ ಕೊಡುಗೆ ನೀಡಿದ್ದಾರೆ. ಕರ್ನಾಟಕದ ಪರಂಪರೆ ಶ್ರೀಮಂತವಾಗಿದ್ದು, ಅದನ್ನು ಇಂದಿನ ಯುವಜನರಿಗೆ ತಿಳಿಹೇಳುವ ಅಗತ್ಯವಿದೆ ಎಂದರು.

ಸರ್ವರಿಗೂ ಸಮಪಾಲು, ಸಮಸಮಾಜದ ಕಲ್ಪನೆಯನ್ನು ಬಸವಾದಿ ಶರಣರು 12ನೇ ಶತಮಾನದಲ್ಲೇ ಪ್ರತಿಪಾದಿಸಿದರು. ಸಾಮಾಜಿಕ ಬದಲಾವಣೆಗೆ ಅವರು ನೀಡಿದ ಕೊಡುಗೆ ಅನುಪಮವಾದ್ದು ಎಂದ ಅವರು ಆಧುನಿಕ ಕರ್ನಾಟಕದ ಪ್ರಗತಿಗೆ ವೀರಶೈವ ಲಿಂಗಾಯತ ಮಠ ಮಾನ್ಯಗಳು ನೀಡಿರುವ ಕೊಡುಗೆಯೂ ಅಪಾರ ಎಂದರು.

ಯಾವುದೇ ಜಾತಿ, ಧರ್ಮ, ಜನಾಂಗದ ಭೇದವಿಲ್ಲದೆ ಸರ್ವರಿಗೂ ಆಶ್ರಯ, ಅನ್ನ, ಅಕ್ಷರವೆಂಬ ತ್ರಿವಿಧ ದಾಸೋಹ ಮಾಡುತ್ತಿರುವ ನಮ್ಮ ಮಠ ಮಾನ್ಯಗಳು ಶಿಕ್ಷಣ, ಆರೋಗ್ಯ ಕ್ಷೇತ್ರಕ್ಕೆ ದೊಡ್ಡ ಕೊಡುಗೆ ನೀಡಿವೆ ಎಂದರು.

ಮಕ್ಕಳಿಗೆ ಸಂಸ್ಕೃತಿಯ ಪರಿಚಯ ಮಾಡಿಸಬೇಕು. ಇಂದು ಯುವ ಜನರು ಮದ್ಯ, ಮಾದಕ ದ್ರವ್ಯ ವ್ಯಸನಿಗಳಾಗುತ್ತಿದ್ದಾರೆ. ತಾಯಂದಿರು ಮಕ್ಕಳಿಗೆ ಬಾಲ್ಯದಿಂದಲೇ ವಚನಗಳನ್ನು ಕಲಿಸಿದರೆ ಜೀವನದರ್ಶನ ಆಗುತ್ತದೆ. ಮಕ್ಕಳ ಬದುಕು ಹಸನಾಗುತ್ತದೆ ಎಂದರು.

ತಿಪಟೂರು ತಾಲ್ಲೂಕು ಕೆರಗೋಡಿ ರಂಗಾಪುರದ ಶ್ರೀ ಗುರುಪರದೇಶಿಕೇಂದ್ರ ಸ್ವಾಮೀಜಿ, ಪುಷ್ಪಗಿರಿ ಮಹಾಸಂಸ್ಥಾನ ಮಠದ ಶ್ರೀ ಸೋಮಶೇಖರ ಸ್ವಾಮೀಜಿ, ತಮ್ಮಡಿಹಳ್ಳಿ ಮಠದ ಅಭಿನವ ಮಲ್ಲಿಕಾರ್ಜುನ ದೇಶಿಕೇಂದ್ರ ಸ್ವಾಮೀಜಿ, ಕೋಳಗುಂದ ಕೇದಿಗೆ ಮಠದ ಜಯಚಂದ್ರಶೇಖರ ಸ್ವಾಮೀಜಿ, ಚಿಕ್ಕನಾಯಕನಹಳ್ಳಿಯ ಮೃತ್ಯುಂಜಯ ದೇಶಿಕೇಂದ್ರ ಸ್ವಾಮೀಜಿ, ಕರಡಿಗವಿ ಶಿವಶಂಕರ ಶಿವಯೋಗಿ ಸ್ವಾಮೀಜಿ, ಕಲ್ಯಾಣನಗರ ಬಸವ ತತ್ವ ಪೀಠದ ಬಸವ ಮರುಳಸಿದ್ದ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು.

ಸಂಸದ ಶ್ರೇಯಸ್ ಪಟೇಲ್, ಶಾಸಕ ಹೆಚ್.ಕೆ. ಸುರೇಶ್, ಮಾಜಿ ಶಾಸಕ ಕೆ.ಎಸ್. ಲಿಂಗೇಶ್, ಮಾಜಿ ಶಾಸಕರಾದ ಕೆ.ಎಸ್.ಲಿಂಗೇಶ್, ಹೆಚ್.ಕೆ.ಕುಮಾರಸ್ವಾಮಿ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಇ.ಹೆಚ್.ಲಕ್ಷ್ಮಣ್, ತಾಲ್ಲೂಕು ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಎ.ಎಸ್.ಬಸವರಾಜು, ತಾಲ್ಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಬ್ಬಾಳು ಹಾಲಪ್ಪ, ಮುಖಂಡ ದೊಡ್ಡವೀರೇಗೌಡ ಮತ್ತಿತರರಿದ್ದರು.

### ಸುಂದರ ಬದುಕಿಗೆ ಸೋಪಾನ ಅರಣ್ಯ



ಅರಣ್ಯ ಉಳಿದರಷ್ಟೇ ಮಾನವ ಉಳಿಯಲು ಸಾಧ್ಯ ಎಂದು ಪ್ರತಿಪಾದಿಸಿದ ಈಶ್ವರ್ ಖಂಡ್ರೆ, ಕಾಡಿದ್ದರೆ ಮಳೆ ಆಗುತ್ತದೆ, ಕಾಡಿದ್ದರೆ ಹಸಿರು ಹೊದಿಕೆ ಹೆಚ್ಚುತ್ತದೆ, ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯ ಕಾಲಘಟ್ಟದಲ್ಲಿ ಸುಂದರ ಬದುಕಿಗೆ ಸೋಪಾನವಾಗುತ್ತದೆ ಎಂದರು.

ಪೂರ್ವಿಕರು ಬೆಟ್ಟ, ಗುಡ್ಡಗಳ ಮೇಲೆ ದೇವಾಲಯ ನಿರ್ಮಿಸುವ ಮೂಲಕ ಪ್ರಕೃತಿ ಪರಿಸರ ಉಳಿಸಿದ್ದಾರೆ. ಬೆಟ್ಟದ ಮೇಲೆ ದೇವಾಲಯ ಇರುವ ಕಾರಣ ಆ ಗುಡ್ಡಗಳನ್ನು, ಬೆಟ್ಟಗಳನ್ನು ಯಾರೂ ನಾಶ ಮಾಡಿಲ್ಲ. ನಮ್ಮ ಪೂರ್ವಿಕರ ದೂರದರ್ಶಿತ್ವ ಅಮೂಲ್ಯವಾದ್ದು ಎಂದರು.

ತಾವು ಅರಣ್ಯ ಸಚಿವರಾದ ಬಳಿಕ 7ನೇ ಬಾರಿಗೆ ಜಿಲ್ಲೆಗೆ ಬಂದಿದ್ದು, ಇಲ್ಲಿನ ಮಾನವ- ವನ್ಯಜೀವಿ ಸಂಘರ್ಷವನ್ನು ನಿಯಂತ್ರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿರುವುದಾಗಿ ತಿಳಿಸಿದರು.

ಉದ್ಯಮಿ ಕಾಂಗ್ರೆಸ್ ಮುಖಂಡ ಗ್ರಾನೈಟ್ ರಾಜಶೇಖರ್ ಮಾತನಾಡಿ, ಹುಲಿಕಲ್ಲು ವೀರಭದ್ರೇಶ್ವರ ಕ್ಷೇತ್ರದಲ್ಲಿ ರುದ್ರಮುನಿ ಮಹರ್ಷಿಗಳು ಕಠಿಣ ತಪಸ್ಸು ಮಾಡಿದ್ದರು. ಕ್ಷೇತ್ರಕ್ಕೆ ಪ್ರಾಚೀನ ಪರಂಪರೆ ಇದೆ. ಬೆಟ್ಟದ ನಿಲಿಗಿರಿ ತಪ್ಪಲಿನಲ್ಲಿ ಎರಡು ಎಕರೆ ಜಾಗ ಕೊಟ್ಟರೆ ನಂದನವನ ಮಾಡುತ್ತೇವೆ. ಘಟ್ಟದಹಳ್ಳಿ ದಾಖಲೆಯಲ್ಲಿರುವ ಸರ್ಕಾರಿ ಭೂಮಿಯಲ್ಲಿ 10 ಎಕರೆ ಜಮೀನನ್ನು ಹುಲಿಕಲ್ಲೇಶ್ವರ ಕ್ಷೇತ್ರಕ್ಕೆ ಕೊಡಿಸಬೇಕು. ಈ ನಿಟ್ಟಿನಲ್ಲಿ ಸಚಿವ ಈಶ್ವರಖಂಡ್ರೆ ಅವರ ಸಹಾಯ ಬೇಕಿದೆ ಎಂದರು.

# ಪತ್ನಿಯನ್ನೇ ಕಿಡ್ನಾಪ್ ಮಾಡಿದ ಪತಿರಾಯ

## ಪ್ರೇಮ ವಿವಾಹಕ್ಕೆ ಪಾಲಕರ ಅಡ್ಡಿ ಆರೋಪ : ಠಾಣೆಗೆ ದೂರು ನೀಡಿದ ನವ ವಿವಾಹಿತೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ವಿರೋಧದ ನಡುವೆ ಮದುವೆಯಾಗಿದ್ದ ಪುತ್ರಿಯನ್ನು ವಾಪಸ್ ಮನೆಗೆ ಕರೆತಂದಿದ್ದ ಪಾಲಕರಿಗೆ ಮಗಳೇ ತಿರುಗಿ ಬಿದ್ದಿದ್ದು, ತಾನು ಯುವಕನನ್ನು ಮನಸಾರೆ ಪ್ರೀತಿಸಿ ಮದುವೆಯಾಗಿದ್ದೇನೆ. ನಮ್ಮನ್ನು ಬೇರೆ ಮಾಡಲು ಪಾಲಕರು ಮುಂದಾಗಿದ್ದಾರೆ ಎಂದು ದೂರು ನೀಡಿರುವ ಪ್ರಕರಣ ಮಂಗಳವಾರ ನಡೆದಿದೆ.

ಚನ್ನರಾಯಪಟ್ಟಣದ ಪ್ರಜ್ವಲ್ ಎಂಬ ಯುವಕ ತಾಲ್ಲೂಕಿನ ಮಲಸಾವರ ಗ್ರಾಮದ ಪ್ರಸ್ಟಲ್ ಡಿಯೀಲಾ ಫರ್ನಾಂಡೀಸ್ ಎಂಬ ಯುವತಿಯನ್ನು ಪ್ರೀತಿಸಿ ಮದುವೆಯಾಗಿದ್ದಾನೆ. ಅದಕ್ಕೆ ಆಕೆಯ ಪಾಲಕರು ಒಪ್ಪದೆ ಎರಡು ತಿಂಗಳ ಹಿಂದೆ ತವರಿಗೆ ಕರೆದುಕೊಂಡು ಬಂದಿದ್ದರು ಎನ್ನಲಾಗಿದೆ.

### ಪ್ರಜ್ವಲ್‌ನನ್ನು ಕರೆಸಿಕೊಂಡಿದ್ದರು

ಯುವತಿಯ ಪಾಲಕರು ವಾಪಸ್ ಪ್ರಜ್ವಲ್ ಜೊತೆ ಮಗಳನ್ನು ಕಳುಹಿಸಲು ಒಪ್ಪಿಗೆ ನೀಡಿರಲಿಲ್ಲ. ಈ ಬಗ್ಗೆ ಯುವತಿ ಪ್ರಜ್ವಲ್‌ಗೆ ಮಾಹಿತಿ ನೀಡಿ ಅರೇಹಳ್ಳಿಗೆ ಬರುವಂತೆ ಹೇಳಿದ್ದರು. ಮಂಗಳವಾರ ಅರೇಹಳ್ಳಿ ಪಟ್ಟಣಕ್ಕೆ ತಂದೆಯೊಂದಿಗೆ ಬಂದಿದ್ದ ಯುವತಿಯನ್ನು ಪ್ರಜ್ವಲ್ ಕರೆದುಕೊಂಡು ಹೋಗಲು ಯತ್ನಿಸಿದ್ದ. ಅದಕ್ಕೆ ಯುವತಿಯ ತಂದೆ ವಿರೋಧ ವ್ಯಕ್ತಪಡಿಸಿದ್ದಾರೆ. ಯುವತಿ ಕಾರು ಹತ್ತಿ ತನ್ನ ಪತಿಯೊಂದಿಗೆ ಹೋಗಲು ಮುಂದಾದಾಗ ಪ್ರಜ್ವಲ್ ಜೊತೆ ಮಗಳನ್ನು ಕಳುಹಿಸಲು ನಿರಾಕರಿಸಿದ ತಂದೆ ಕಾರಿಗೆ ಅಡ್ಡ ಹೋಗಿ ಮಗಳನ್ನು ಬಿಡಿಸಿಕೊಳ್ಳಲು ಯತ್ನಿಸಿದರು. ಈ ವೇಳೆ ಚಲಿಸುತ್ತಿದ್ದ ಕಾರನ್ನು ತಡೆಯಲು ಹೋದ ಯುವತಿಯ ತಂದೆ ಡೋರ್‌ನಲ್ಲಿ ನೇತಾಡುತ್ತಿದ್ದರೂ ಕಾರು ನಿಲ್ಲಿಸದೆ ಪ್ರಜ್ವಲ್ ಹಾಗೂ ಸ್ನೇಹಿತರು ಪರಾರಿಯಾಗಿದ್ದಾರೆ. ಈ ದೃಶ್ಯ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಕಡೆಗೆ ಆಯತಪ್ಪಿ ಕಾರಿನಿಂದ ಬಿದ್ದು ಯುವತಿ ತಂದೆ ಗಾಯಗೊಂಡಿದ್ದಾರೆ.

### ನಾವಿಬ್ಬರೂ ಮದುವೆಯಾಗಿದ್ದೇವೆ

ಚನ್ನರಾಯಪಟ್ಟಣದ ಪ್ರಜ್ವಲ್ ಎಂಬ ಯುವಕ ತಮ್ಮ ಮಗಳನ್ನು ಅಪಹರಣ ಮಾಡಿದ್ದಾನೆಂದು ಆಕೆಯ ಪಾಲಕರು ಅರೇಹಳ್ಳಿ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಆದರೆ ಅದಕ್ಕೆ ವ್ಯತಿರಿಕ್ತ ಎಂಬಂತೆ ಸಂಜೆ ಚನ್ನರಾಯಪಟ್ಟಣ ಠಾಣೆಗೆ ಭೇಟಿ ನೀಡಿರುವ ಪ್ರಸ್ಟಲ್ ಡಿಯೀಲಾ, ನನ್ನನ್ನು ಯಾರೂ ಅಪಹರಿಸಿಲ್ಲ. ಪ್ರಜ್ವಲ್‌ನನ್ನು ಮದುವೆಯಾಗಿದ್ದೇನೆ. ತಂದೆ-ತಾಯಿ ನೀಡಿರುವ ದೂರು ಸುಳ್ಳು ಎಂದು ಪ್ರತಿಪಾದಿಸಿದ್ದಾರೆ.

# ಜಿಲ್ಲೆಯ ಎರಡು ಕಡೆ ಚಿರತೆ ದಾಳಿ: ಗ್ರಾಮಸ್ಥರ ಆತಂಕ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಚನ್ನರಾಯಪಟ್ಟಣ ತಾಲ್ಲೂಕಿನ ಅಂತನಹಳ್ಳಿ ಹಾಗೂ ಆಲೂರು ತಾಲ್ಲೂಕಿನ ಕಣಿವೆಬಸವನಹಳ್ಳಿ ಗ್ರಾಮದಲ್ಲಿ ಚಿರತೆ ದಾಳಿ ವರದಿಯಾಗಿದ್ದು ಮೂರು ವರ್ಷದ ಕರು ಬಲಿಯಾಗಿದ್ದರೆ, ಮತ್ತೊಂದೆಡೆ ಸಾಕು ನಾಯಿ ಗಂಭೀರ ಗಾಯಗೊಂಡಿದೆ.

ಆಲೂರು ತಾಲ್ಲೂಕು ಮಗ್ಗೆ ಹೋಬಳಿ ಕಣಿವೆಬಸವನಹಳ್ಳಿ ಗ್ರಾಮದ ಕೆ.ಹೆಚ್. ಗಂಗಾಧರ್ ಎಂಬುವರಿಗೆ ಸೇರಿದ ಮೂರು ವರ್ಷದ ಕರು ಮೇಲೆ ಮಂಗಳವಾರ ಸಂಜೆ ಚಿರತೆ ದಾಳಿ ನಡೆಸಿ ಕೊಲೆಗೈದಿದೆ. ರಾಮಚಂದ್ರು ಅವರ ಜಮೀನಿನಲ್ಲಿ ಜಾನುವಾರುಗಳನ್ನು ಮೇಯಲು ಬಿಡಲಾಗಿತ್ತು. ಈ ವೇಳೆ ಏಕಾಏಕಿ ನುಗ್ಗಿದ ಚಿರತೆಯು ಕರುವಿನ ಮೇಲೆ ಎರಗಿ ಕೊಲೆ ಮಾಡಿದೆ. ಅಲ್ಲಿಯೇ ಇದ್ದ ಗಂಗಾಧರ್ ಅವರು ಜೋರಾಗಿ ಕೂಗುತ್ತಿದ್ದಂತೆ ಚಿರತೆ ಓಡಿ ಹೋಗಿದೆ.

ಚಿರತೆ ದಾಳಿ ಕುರಿತು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಕರೆ ಮಾಡಿ ತಿಳಿಸಿದರೂ ಯಾರು ಬರಲಿಲ್ಲ ಎಂದು ರೈತ ಗಂಗಾಧರ್ ಆರೋಪಿಸಿದ್ದಾರೆ. ಎರಡು ವರ್ಷಗಳಿಂದಲೂ ಈ ಭಾಗದಲ್ಲಿ ಚಿರತೆಗಳ ಸಂಚಾರ ಹೆಚ್ಚಿದೆ. ಈ ಹಿಂದೆ ಬೋನು ಅವಳಡಿಸಲಾಗಿತ್ತಾದರೂ ಅದನ್ನು ತೆರವುಗೊಳಿಸಲಾಗಿದೆ. ಹೀಗಾಗಿ ಚಿರತೆಗಳು ಯಾವುದೇ ಭಯವಿಲ್ಲದೆ ಸಂಚರಿಸುತ್ತಿವೆ.

ಅರಣ್ಯ ಇಲಾಖೆ ನಿರ್ಲಕ್ಷ್ಯದಿಂದ ಜಮೀನುಗಳಿಗೆ ತೆರಳಲು ಭಯವಾಗುತ್ತಿದೆ. ಇನ್ನಾದರೂ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

### ನಾಯಿ ಮೇಲೆ ದಾಳಿ



ಚನ್ನರಾಯಪಟ್ಟಣ ತಾಲ್ಲೂಕಿನ ಹಿರೀಸಾವೆ ಹೋಬಳಿ ಅಂತನಹಳ್ಳಿ ಹಾಗೂ ಸುತ್ತಲಿನ ಗ್ರಾಮಗಳಲ್ಲಿ ಚಿರತೆ ಸಂಚಾರ ಹೆಚ್ಚಿದ್ದು ಸಾಕು ಪ್ರಾಣಿಗಳ ಮೇಲೆ ದಾಳಿ ನಡೆಸುತ್ತಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಸೋಮವಾರ ರಾತ್ರಿ ಗ್ರಾಮದ ರವಿ ಎಂಬುವರ ಮನೆ ಬಳಿಗೆ ಬಂದು ಮುಧೋಳ ನಾಯಿ ಮೇಲೆ ಚಿರತೆ ದಾಳಿ ಮಾಡಿದೆ. ನಾಯಿ ಕಿರುಚಾಟದಿಂದ ಮನೆಯವರು ಹೊರಗೆ ಬಂದು ಕೂಗಾಡಿದಾಗ ಚಿರತೆ ನಾಯಿಯನ್ನು ಬಿಟ್ಟು ಓಡಿಹೋಗಿದೆ.

ನಾಯಿಯ ಕೊರಳ ಭಾಗದಲ್ಲಿ ಗಾಯವಾಗಿದ್ದು, ಮಂಗಳವಾರ ಚಿಕಿತ್ಸೆ ಕೊಡಿಸಲಾಗಿದೆ. ಕೆಲವು ತಿಂಗಳಿನಿಂದ ಜಾನುವಾರು, ಕರು ಮತ್ತು ಬೀದಿ ನಾಯಿ, ಸಾಕು ನಾಯಿಗಳನ್ನು ಎಳೆದುಕೊಂಡು ಹೋಗಿ ತಿಂದು ಹಾಕಿದೆ. ಅರಣ್ಯ ಇಲಾಖೆಯವರು ಚಿರತೆ ಹಿಡಿದು ಸ್ಥಳಾಂತರಿಸಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

# ಆನೆ ಸೆರೆ, ಪಳಗಿಸುವ ಕಾರ್ಯ: ಮುಂಚೂಣಿಯಲ್ಲಿ ರಾಜ್ಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಬೇಲೂರು: ಆನೆ ಸೆರೆ ಹಿಡಿಯುವುದು, ಪಳಗಿಸುವುದರಲ್ಲಿ ರಾಜ್ಯ ದೇಶದಲ್ಲೇ ಮುಂಚೂಣಿಯಲ್ಲಿದೆ ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ಹೇಳಿದರು.

ತಾಲ್ಲೂಕಿನ ಬಿಕ್ಕೋಡು ಗ್ರಾಮದಲ್ಲಿ ಮಂಗಳವಾರ ಆನೆ ಕಾರ್ಯಪಡೆ ಕಚೇರಿ ಕಟ್ಟಡಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ವನ್ಯಜೀವಿ ಸಂರಕ್ಷಣಾ ಕಾಯಿದೆಯನ್ನು ಕಟ್ಟುನಿಟ್ಟಾಗಿ ಅನುಷ್ಠಾನಕ್ಕೆ ತಂದಿರುವ ಹಿನ್ನೆಲೆಯಲ್ಲಿ ವನ್ಯಜೀವಿಗಳ ಸಂಖ್ಯೆಯಲ್ಲಿ ಹೆಚ್ಚಳವಾಗಿದೆ. ಆನೆಗಳ ಸಂಖ್ಯೆಯಲ್ಲಿ ರಾಜ್ಯ ನಂ.1 ಆಗಿದ್ದು, 6395 ಆನೆಗಳಿವೆ. ಹೀಗಾಗಿ ಮಾನವ-ವನ್ಯಜೀವಿ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಅಗತ್ಯವಿದೆ ಎಂದರು.

ಜಿಲ್ಲೆಯಲ್ಲಿ ಕಳೆದ 10-20 ವರ್ಷಗಳಲ್ಲಿ ಆನೆಗಳ ಹಾವಳಿ ಹೆಚ್ಚಳವಾಗಿದ್ದು, ಆನೆಗಳನ್ನು ಸ್ಥಳಾಂತರ ಮಾಡಿದರೂ ಮತ್ತೆ ಅಲ್ಲಿಗೇ ಬರುತ್ತವೆ. ಹಾಸನದ ತೋಟಗಳಲ್ಲಿಯೇ 50-60 ಆನೆಗಳಿವೆ. ಇದೇ ಸಮಸ್ಯೆ ಚಿಕ್ಕಮಗಳೂರು ಮತ್ತು ಕೊಡಗಿನಲ್ಲೂ ಇದೆ ಎಂದರು.

ಅರಣ್ಯ ಹಾಗೂ ಈ ಭಾಗದ ತೋಟಗಳು ಒಂದೇ ರೀತಿ ಇರುವ ಕಾರಣ ಆನೆಗಳು ಇಲ್ಲಿ ಸ್ವಚ್ಛಂದವಾಗಿ ವಿಹರಿಸುತ್ತವೆ. ಹೀಗಾಗಿ ಆನೆಗಳು ನಾಡಿಗೆ ಬಾರದಂತೆ ತಡೆಯಲು ರೈಲ್ವೆ ಬ್ಯಾರಿಕೇಡ್, ಆನೆ ಕಂದಕ, ಸೌರ ತಂತಿಬೇಲಿಯೇ ಮೊದಲಾದ ವಿವಿಧ ಕ್ರಮಗಳನ್ನು ಕಾರ್ಯಗತಗೊಳಿಸಲಾಗಿದೆ ಎಂದರು.

ಜಿಲ್ಲೆಯಲ್ಲಿ ಜನರಿಗೆ ತೊಂದರೆ ನೀಡುತ್ತಿರುವ ಪುಂಡಾನೆಗಳ ಸೆರೆಗೆ ಕಾರ್ಯಾಚರಣೆ ಮಾಡಲು ಸೂಚನೆ ನೀಡಲಾಗಿದ್ದು, ಅರಣ್ಯ ಇಲಾಖೆ ಯಶಸ್ವಿಯಾಗಿ ಆನೆ ಸೆರೆ ಹಿಡಿಯುತ್ತಿದೆ ಎಂದರು. ಆನೆಗಳ ಸಮಸ್ಯೆ ಹೆಚ್ಚಾಗಿರುವ ಬಿಕ್ಕೋಡು ಭಾಗದಲ್ಲಿ ಒಂದು ಆನೆ ಕಾರ್ಯಪಡೆಯ ಶಿಬಿರವನ್ನೇ ರಚಿಸಬೇಕು. ಇಲ್ಲಿ ಡಿಸಿಎಫ್ ದರ್ಜೆಯ ಅಧಿಕಾರಿ ನೇತೃತ್ವದಲ್ಲಿ ಆನೆಗಳ ಚಲನವಲನದ ಬಗ್ಗೆ ನಿಗಾ ಇಟ್ಟು, ಸಾರ್ವಜನಿಕರಿಗೆ ಸಕಾಲಿಕ ಮಾಹಿತಿ ನೀಡಬೇಕು ಎಂದು ಸೂಚಿಸಿದ್ದು, ಇಲ್ಲಿ ತಾತ್ಕಾಲಿಕ ಶಿಬಿರ ಮಾಲಾಗಿದೆ. ಈಗ ಇಲ್ಲಿ ಕಟ್ಟಡವನ್ನೇ ನಿರ್ಮಾಣ ಮಾಡುತ್ತಿದ್ದು, ಇದನ್ನು ತಾವೇ ಉದ್ಘಾಟನೆ ಮಾಡುವುದಾಗಿ ಹೇಳಿದರು.

> ಪ್ರಸಕ್ತ ಸನ್ನಿವೇಶದಲ್ಲಿ ಕಾಡಿನಂಚಿನ ಜನರಿಗೆ ವನ್ಯಜೀವಿಗಳೊಂದಿಗೆ ಸಹಬಾಳ್ವೆ ನಡೆಸುವ ಬಗ್ಗೆ ಅರಿವು ಮೂಡಿಸುವ ಅಗತ್ಯವಿದೆ. ಅದೇ ವೇಳೆ ರೈತರ ಬೆಳೆ ಮತ್ತು ಅಮೂಲ್ಯ ಜೀವಹಾನಿ ಆಗದಂತೆ ತಡೆಯುವ ಅಗತ್ಯವೂ ಇದೆ. ಈ ಕಾರ್ಯವನ್ನು ಅರಣ್ಯ ಇಲಾಖೆ ಪ್ರಾಮಾಣಿಕವಾಗಿ ಮಾಡಲಿದೆ.
>
> - ಈಶ್ವರ್ ಖಂಡ್ರೆ, ಅರಣ್ಯ ಸಚಿವ

### ಆನೆ ಧಾಮ ಎಂಬ ಹೊಸ ಕಲ್ಪನೆ

ಆನೆ ಧಾಮ ಅಥವಾ ಸಾಫ್ಟ್ ರಿಲೀಸ್ ಸೆಂಟರ್ ಹೊಸ ಪರಿಕಲ್ಪನೆ ಮತ್ತು ಪ್ರಯೋಗವಾಗಿದ್ದು, ಕರ್ನಾಟಕದಲ್ಲಿ ಮೊದಲ ಬಾರಿಗೆ ರಚಿಸಲಾಗುತ್ತಿದೆ. ಇದು ಸಮರ್ಥವಾಗಿ ಆನೆ ಸಮಸ್ಯೆಗೆ ಪರಿಹಾರ ಒದಗಿಸುತ್ತದೆ ಎಂಬುದು ಶೇ.80ರಷ್ಟು ಅಧಿಕಾರಿಗಳ ಅಭಿಪ್ರಾಯವಾಗಿದ್ದರೆ ಉಳಿದ ಶೇ.20ರಷ್ಟು ಅಧಿಕಾರಿಗಳು ಇದು ಸೂಕ್ತವಾದ ಕ್ರಮವಲ್ಲ ಎಂದೂ ಹೇಳುತ್ತಾರೆ. ರಾಜ್ಯ ಸರ್ಕಾರ ಈ ಹೊಸ ಪ್ರಯೋಗ ಮಾಡಲು ಕ್ರಮ ವಹಿಸಿದೆ ಎಂದರು.

ಆನೆ ಧಾಮ ಸ್ಥಾಪಿಸಲು 15-20 ದಿನಗಳ ಒಳಗಾಗಿ ಟೆಂಡರ್ ಕರೆದು, 2 ತಿಂಗಳ ಒಳಗಾಗಿ ಶಂಕುಸ್ಥಾಪನೆ ನೆರವೇರಿಸಿ ಕಾಮಗಾರಿ ಆರಂಭಿಸಲಾಗುವುದು ಎಂದು ಈಶ್ವರ ಖಂಡ್ರೆ ಇದೇ ಸಂದರ್ಭದಲ್ಲಿ ಭರವಸೆ ನೀಡಿದರು.

ಸಂಸದ ಶ್ರೇಯಸ್ ಪಟೇಲ್, ಶಾಸಕ ಹೆಚ್.ಕೆ. ಸುರೇಶ್, ಸಿಸಿಎಫ್ ಏಡುಕುಂಡಲ, ಡಿಸಿಎಫ್ ಸೌರಭ್‌ಕುಮಾರ್, ಕ್ಷೀರಸಾಗರ್ ಮತ್ತಿತರರು ಪಾಲ್ಗೊಂಡಿದ್ದರು.



# ಪರಿಶಿಷ್ಟರ ಜಾತಿ ಗಣತಿ: ಲೋಪ ಸರಿಪಡಿಸಿಕೊಳ್ಳಲು ಸಲಹೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಹಾಸನ: ಪರಿಶಿಷ್ಟ ಜಾತಿ ಒಳ ಮೀಸಲಾತಿ ಸಂಬಂಧ ಎಸ್‌ಸಿ ಪಟ್ಟಿಯಲ್ಲಿರುವ 101 ಜಾತಿಗಳ ಸಮೀಕ್ಷೆ ಕಾರ್ಯದಲ್ಲಿ ಹಲವು ಲೋಪದೋಷ ಕಂಡುಬಂದಿದ್ದು, ಸರಿಪಡಿಸಬೇಕು ಎಂದು ಮಾಜಿ ಸಚಿವ ಹೆಚ್.ಕೆ. ಕುಮಾರಸ್ವಾಮಿ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಮೇ 5 ರಿಂದ ಸಮೀಕ್ಷಾ ಕಾರ್ಯ ಪ್ರಾರಂಭವಾಗಿದೆ. ಮೂರು ಹಂತಗಳಲ್ಲಿ ನಡೆಯುತ್ತಿರುವ ಈ ಸಮೀಕ್ಷೆ ಕಾರ್ಯ ಮೇ 23 ರಂದು ಕೊನೆಗೊಳ್ಳುತ್ತದೆ ಎಂದು ಸರ್ಕಾರ ತಿಳಿಸಿದೆ. ಅಂತೆಯೇ ಸಮೀಕ್ಷೆ ಕಾರ್ಯ ಮುಗಿಯಲು ಇನ್ನೂ 13 ದಿನ ಮಾತ್ರ ಬಾಕಿ ಇದೆ. ಆದರೆ ಈ ಸಮೀಕ್ಷೆ ವೇಳೆ ಗಣತಿದಾರರು ಹಾಗೂ ಸಂಬಂಧಿತ ಜಾತಿಗಳ ಜನರ ನಡುವೆ ಸರಿಯಾದ ಹೊಂದಾಣಿಕೆ ಆಗದೆ ಸಮೀಕ್ಷೆ ಕಾರ್ಯ ಅಪೂರ್ಣಗೊಳ್ಳುವ ಆತಂಕ ಎದುರಾಗಿದೆ ಎಂದರು.

ಆದ್ದರಿಂದ ಸಂಬಂಧಪಟ್ಟವರು ಕೂಡಲೇ ಗಮನಹರಿಸಿ ಸಮೀಕ್ಷೆ ಕಾರ್ಯ ಯಶಸ್ವಿಯಾಗಿ ನಡೆಯಲು ಸೂಕ್ತ ಕ್ರಮ ಕೈಗೊಳ್ಳಬೇಕು. ಸಮೀಕ್ಷೆ ಸಮಯದಲ್ಲಿ ನಮ್ಮ ಗಮನಕ್ಕೆ ಬಂದಿರುವ ಕೆಲ ಅಂಶಗಳೇಂದರೆ ಸಮೀಕ್ಷಾ ಕಾರ್ಯ ಆರಂಭವಾಗಿ 12 ದಿನ ಕಳೆದಿದ್ದರೂ, ಬಹುತೇಕ ಹಳ್ಳಿ ಮತ್ತು ನಗರ ಪಟ್ಟಣದ ಮನೆಗಳಿಗೆ ಗಣತಿದಾರರು ಭೇಟಿ ನೀಡಿಯೇ ಇಲ್ಲ. ಈ ಬಗ್ಗೆ ಕೂಡಲೇ ಗಮನಹರಿಸಿ ಸಂಬಂಧಪಟ್ಟ ನೋಡೆಲ್ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿ, ಸಮೀಕ್ಷೆ ಕಾರ್ಯ ಯಶಸ್ವಿಗೊಳಿಸಬೇಕೆಂದು ವಿನಂತಿಸಿದರು.

ಸಮೀಕ್ಷೆಗಾಗಿ ರೂಪಿಸಲಾಗಿರುವ ಆಂಡ್ರಾಯ್ಡ್ ಅಪ್ಲಿಕೇಶನ್‌ನಲ್ಲಿ ತಾಂತ್ರಿಕ ದೋಷಗಳಿದ್ದು, ಅದನ್ನು ಸರಿಪಡಿಸಬೇಕು. ಮನೆ ಮನೆಗೆ ಭೇಟಿ ನೀಡುತ್ತಿರುವ ಗಣತಿದಾರರು ಸರ್ವರ್ ಸಮಸ್ಯೆ ಇದೆ, ನಾಳೆ ಬರುತ್ತೇವೆ ಎಂದು ಅರ್ಧದಲ್ಲೇ ಸಮೀಕ್ಷೆ ನಿಲ್ಲಿಸಿ ಹೋದರೆ ಮತ್ತೆ ಬರುತ್ತಿಲ್ಲ ಎಂದು ದೂರಿದರು.

ಸಂಬಂಧಪಟ್ಟ ಅಧಿಕಾರಿಗಳು ತಾಂತ್ರಿಕ ದೋಷ ಸರಿಪಡಿಸಬೇಕು. ಸಮೀಕ್ಷೆದಾರರು ಹಳ್ಳಿಗಳಿಗೆ, ಮನೆಮನೆಗೆ ಭೇಟಿ ನೀಡುವ ಸಮಯ ಮತ್ತು ದಿನಾಂಕವನ್ನು ಕರ ಪತ್ರದಲ್ಲಿ ಮುದ್ರಿಸಿ ಹಂಚಬೇಕು. ಸಮೀಕ್ಷೆ ಆಪ್‌ನಲ್ಲಿ ಸುಮಾರು 40ಕ್ಕೂ ಹೆಚ್ಚು ಪ್ರಶ್ನೆ ಕೇಳಲಾಗಿದೆ. ಆದರೆ ಕ್ಲಿಷ್ಟಕರ ಪ್ರಶ್ನೆಗಳಿಗೆ ಉತ್ತರಿಸಲು ಅವಿದ್ಯಾವಂತ, ಅನಕ್ಷರಸ್ಥ ಕುಟುಂಬಗಳಿಗೆ ಸಾಧ್ಯವಾಗುತ್ತಿಲ್ಲ. ಪ್ರಶ್ನೆ ಮಾದರಿ ಬದಲಿಸಿ, ಸರಳವಾಗಿ ಕೇಳಲು ಸೂಚಿಸಬೇಕು ಎಂದರು. ಹಾಗೆಯೇ ಜಾತಿ ಗಣತಿ ಅವಧಿಯನ್ನು ವಿಸ್ತರಣೆ ಮಾಡುವಂತೆ ಆಗ್ರಹಿಸಿದರು.

ದಲಿತ ಮುಖಂಡರಾದ ಅಂಬುಗ ಮಲ್ಲೇಶ್, ಹೆಚ್.ಪಿ. ಶಂಕರರಾಜು, ಎಸ್.ಸಿ. ಎಸ್.ಟಿ. ಅಧಿಕಾರಿಗಳ ಸಂಘದ ಅಧ್ಯಕ್ಷ ಹೆಚ್. ಕಾಡಯ್ಯ, ಕಾರ್ಯದರ್ಶಿ ನಾಗರಾಜು ಹೆತ್ತೂರ್, ಕಾಂಗ್ರೆಸ್ ಎಸ್.ಸಿ. ಘಟಕ ಜಿಲ್ಲಾಧ್ಯಕ್ಷ ದ್ಯಾವಪ್ಪ ಮಲ್ಲಿಗೆವಾಳು, ನಗರಸಭೆ ಸದಸ್ಯ ಮಂಜುನಾಥ್ ಇತರರಿದ್ದರು.

# ಗ್ರಾಹಕರ ಕೈ ಸುಡುತ್ತಿದೆ ತೆಂಗಿನಕಾಯಿ ಬೆಲೆ

## 60 ರೂ. ತಲುಪಿದ ಕಾಯಿ ದರ : ಹೋಟೆಲ್ ಉದ್ಯಮಕ್ಕೂ ಹೊಡೆತ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮದುವೆ ಮತ್ತಿತರ ಶುಭ ಸಮಾರಂಭಗಳಿಗೆ ತೆಂಗಿನಕಾಯಿಗೆ ಬೇಡಿಕೆ ಹೆಚ್ಚಾಗುತ್ತಿದ್ದು ಅಗತ್ಯಕ್ಕೆ ತಕ್ಕಷ್ಟು ಪೂರೈಕೆ ಇಲ್ಲದೆ ಕಾಯಿ ಬೆಲೆ ಗಗನಮುಖಿ ಗ್ರಾಹಕರ ಜೇಬಿಗೆ ಕತ್ತರಿ ಹಾಕಿದೆ.

ತಿಂಗಳ ಹಿಂದಷ್ಟೇ 30 ರೂ.ಗೆ ಸಿಗುತ್ತಿದ್ದ ತೆಂಗಿನಕಾಯಿ ಪ್ರಸ್ತುತ 60 ರಿಂದ 70 ರೂ.ಗೆ ಏರಿಕೆಯಾಗಿದೆ. ದರ ಏರಿಕೆಯಿಂದ ಗ್ರಾಹಕರು ಕಂಗಾಲಾಗಿರುವುದು ಮಾತ್ರವಲ್ಲದೆ ಕಾಯಿ ಖರೀದಿಗಾಗಿ ಹುಡುಕಾಟ ನಡೆಸುತ್ತಿದ್ದಾರೆ. ಮದುವೆ ಸಮಾರಂಭಗಳಲ್ಲಿ ತಾಂಬೂಲ ನೀಡಲು ಹಾಗೂ ಅಡುಗೆಗೆ ಅವಶ್ಯಕತೆಯಿರುವುದರಿಂದ ಸಾರ್ವಜನಿಕರು ನೇರವಾಗಿ ರೈತರನ್ನೇ ಸಂಪರ್ಕಿಸುವ ಕೆಲಸಕ್ಕೆ ಮುಂದಾಗಿದ್ದಾರೆ. ಮಧ್ಯವರ್ತಿಗಳ ಮೂಲಕ ಕಾಯಿ ಖರೀದಿಸಿದರೆ ಹೆಚ್ಚಿನ ಬೆಲೆ ತೆರಬೇಕಾಗುತ್ತದೆ ಎಂದು ಹಳ್ಳಿ ಹಳ್ಳಿಗೆ ಭೇಟಿ ನೀಡುತ್ತಿದ್ದಾರೆ.



### ಹೋಟೆಲ್‌ಗಳಿಗೆ ಎಫೆಕ್ಟ್

ತೆಂಗಿನ ಕಾಯಿ ದರ ಏರಿಕೆ ಕೇವಲ ಜನಸಾಮಾನ್ಯರಿಗೆ ಮಾತ್ರವಲ್ಲ. ಹೋಟೆಲ್ ಉದ್ಯಮಕ್ಕೂ ತಟ್ಟಿದೆ. ಚಟ್ನಿ, ಸಾಂಬಾರ್, ಗೊಜ್ಜು, ಪಲಾವ್, ಪಲ್ಯ ಸಹಿತ ನಾನಾ ತಿಂಡಿ-ತಿನಿಸು, ಮಸಾಲ ಪದಾರ್ಥ ತಯಾರಿಸಲು ತೆಂಗಿನಕಾಯಿ ಹೆಚ್ಚು ಬೇಕಿದೆ. ಗ್ರಾಹಕರಿಗೆ ರುಚಿಯಾದ ತಿಂಡಿ-ಊಟ ಪೂರೈಸಬೇಕೆಂದರೆ ದುಬಾರಿಯಾದರೂ ತೆಂಗಿನಕಾಯಿ ಬಳಸುವುದು ಅನಿವಾರ್ಯ ಎನ್ನುತ್ತಾರೆ ಹೋಟೆಲ್ ಮಾಲೀಕರು.

### ದೇಗುಲಗಳಿಗೂ ಬಿಸಿ

ನಿತ್ಯ ಅನ್ನದಾಸೋಹ ವ್ಯವಸ್ಥೆ ಇರುವ ಹಾಗು ಸಾವಿರಾರು ಭಕ್ತರು ಭೇಟಿ ನೀಡುವ ಹೆಸರಾಂತ ದೇಗುಲಗಳಿಗೂ ತೆಂಗಿನಕಾಯಿ ದರ ಏರಿಕೆ ಬಿಸಿ ತಟ್ಟುತ್ತಿದೆ. ನೂರೊಂದು ಈಡುಗಾಯಿ ಅರ್ಪಣೆ ಹರಕೆ ಹೊತ್ತ ಭಕ್ತರು ಕೂಡ ತೆಂಗಿನ ಕಾಯಿ ದರ ಏರಿಕೆಯಿಂದ ಹರಕೆ ಕಾರ್ಯವನ್ನು ಮುಂದೂಡುತ್ತಿದ್ದಾರೆ ಎಂದು ದೇಗುಲದ ಅರ್ಚಕರು ಪ್ರತಿಕ್ರಿಯಿಸಿದ್ದಾರೆ.


### ಮಧ್ಯವರ್ತಿಗಳ ಕರಾಮತ್ತು

ಜಿಲ್ಲೆಯ ಚನ್ನರಾಯಪಟ್ಟಣ, ಅರಸೀಕೆರೆ ಭಾಗದಲ್ಲಿ ತೆಂಗಿನಕಾಯಿ ಹೆಚ್ಚಾಗಿ ಬೆಳೆಯಲಾಗುತ್ತದೆ. ಕೆ.ಜಿ.ಗೆ 80 ರೂ. ನಂತೆ ತೆಂಗಿನಕಾಯಿ ಮಾರಾಟವಾಗುತ್ತಿದ್ದು ಒಂದು ಕೆ.ಜಿ.ಗೆ 3 ಕಾಯಿ ಬೇಕಾಗುತ್ತದೆ. ಆದರೆ ಚಿಲ್ಲರೆ ಅಂಗಡಿಗಳಲ್ಲಿ ಒಂದು ಕಾಯಿಗೆ 60 ರೂ. ತಲುಪಿರುವುದರಿಂದ ಅದರ ಸಂಪೂರ್ಣ ಲಾಭ ರೈತರಿಗೆ ದೊರೆಯುತ್ತಿಲ್ಲ. ಸಾಲ ಸೋಲ ಮಾಡಿ ಕೃಷಿ ಚಟುವಟಿಕೆ ಕೈಗೊಳ್ಳುವ ರೈತರು ಬೆಲೆ ಏರಿಕೆಯಾಗುವ ತನಕ ಕಾಯಿ ಸಂಗ್ರಹಿಸಿಟ್ಟುಕೊಳ್ಳುವುದಿಲ್ಲ. ಸ್ವಸಹಾಯ, ಬ್ಯಾಂಕ್‌ಗಳಲ್ಲಿ ಸಾಲ ಮಾಡಿಕೊಂಡಿರುವುದರಿಂದ ಮಧ್ಯವರ್ತಿಗಳಿಗೆ ಮಾರಾಟ ಮಾಡಿದ್ದಾರೆ. ಅದರ ಲಾಭವನ್ನು ಈಗ ಮಧ್ಯವರ್ತಿಗಳು ಪಡೆಯುತ್ತಿದ್ದಾರೆ. ಹಿಂದೆಂದೂ ದೊರೆಯದ ಬೆಲೆ ಈ ಬಾರಿ ಸಿಗುತ್ತಿರುವುದು ಕಾಯಿ ಇಟ್ಟುಕೊಂಡಿರುವ ಕೆಲವೇ ಪ್ರಮಾಣದ ರೈತರು ಲಾಭದ ಹಳಿಗೆ ಮರಳಿದ್ದಾರೆ.

ಇಳುವರಿ ಕಡಿಮೆಯಾಗಿ ಬೇಡಿಕೆ ಹೆಚ್ಚಿರುವ ಪರಿಣಾಮ ಬೆಲೆ ಏರಿಕೆಯಾಗುತ್ತಲೇ ಇದ್ದು, ಮುಂದಿನ ಒಂದೆರಡು ತಿಂಗಳಲ್ಲಿ ಹೊಸ ತೆಂಗು ಬಂದ ಬಳಿಕವಷ್ಟೇ ಬೆಲೆ ಕಡಿಮೆಯಾಗಬಹುದು ಎನ್ನುತ್ತಾರೆ ವರ್ತಕರು.

ಜಿಲ್ಲೆಯ 1.20 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ತೆಂಗು ಬೆಳೆಯಲಾಗುತ್ತಿದ್ದು, ಈ ಬಾರಿ ಇಳುವರಿ ಕಡಿಮೆಯಾಗಿದೆ. ಬೆಲೆ ಹೆಚ್ಚಳ ಹಿನ್ನಲೆ ಎಳನೀರನ್ನು ಕೀಳಿಸಿ ಮುಂಬಯಿ, ಹೊಸದಿಲ್ಲಿ ಮಾರುಕಟ್ಟೆಗೆ ಕೊಂಡೊಯ್ಯುತ್ತಿರುವ ಪರಿಣಾಮ ಸ್ಥಳೀಯವಾಗಿ ಎಳನೀರಿಗೂ ಬೇಡಿಕೆ ಹೆಚ್ಚಿದೆ. ಕೆಲ ದಿನಗಳ ಹಿಂದೆ 30 ರೂ. ಇದ್ದ ಎಳನೀರು 50 ರಿಂದ 60 ರೂ.ಗೆ ಜಿಗಿತ ಕಂಡಿದೆ. ಕರ್ನಾಟಕ, ಕೇರಳ, ತಮಿಳುನಾಡಿನಲ್ಲಿ ಮಳೆ ಕೊರತೆ ಪರಿಣಾಮ ತೆಂಗಿನ ಇಳುವರಿ ಕಡಿಮೆಯಾಗಿತ್ತು. ಅದರೊಂದಿಗೆ ಕಾಯಿ ಕೀಳಿಸಬೇಕು. ಸುಲಿಸಬೇಕು ಎಂಬ ಕಾರಣದಿಂದ ಎಳನೀರನ್ನೇ ಮಾರಾಟ ಮಾಡಿದ ಪರಿಣಾಮ ಬೇಡಿಕೆಗೆ ಅನುಗುಣವಾಗಿ ತೆಂಗು ಹಾಗು ಕೊಬ್ಬರಿ ಸಿಗದೆ ಬೆಲೆ ಏರಿಕೆಗೆ ಕಾರಣವಾಗಿದೆ ಎನ್ನಲಾಗುತ್ತಿದೆ.

# ಬೇಲೂರಿನಲ್ಲಿ ಪಕ್ಷ ಹಾಳು ಮಾಡಿದ ಶಿವರಾಂ: ಆರೋಪ



ಬೇಲೂರು: ಮಾಜಿ ಸಚಿವ ಬಿ. ಶಿವರಾಂ ಬೇಲೂರಿಗೆ ಕಾಲಿಟ್ಟ ದಿನದಿಂದ ಒಂದು ತಂಡದ ಪರವಾಗಿ ನಿಂತು ಮೂಲ ಕಾಂಗ್ರೆಸ್ಸಿಗರನ್ನು ಕೈ ಬಿಟ್ಟು ಪಕ್ಷದ ನಾಶಕ್ಕೆ ಮುಂದಾಗಿದ್ದಾರೆ ಎಂದು ಪುರಸಭೆ ಅಧ್ಯಕ್ಷ ಎ.ಆರ್. ಅಶೋಕ್ ಆಕ್ರೋಶ ವ್ಯಕ್ತಪಡಿಸಿದರು.

ಪುರಸಭೆ ಕಚೇರಿಯಲ್ಲಿ ವಿಶೇಷ ಪೂಜೆ ಸಲ್ಲಿಸಿ ಮಾತನಾಡಿದ ಅವರು, ನನಗೆ ಒಂದು ವರ್ಷ ಅವಧಿ ಎಂದೇ ಅಧ್ಯಕ್ಷ ಸ್ಥಾನ ನೀಡಲಾಗಿತ್ತು. ಆದರೆ ನಾನು ದಿನನಿತ್ಯ ಪಟ್ಟಣದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕೆಲಸ ಕಂಡು ಸಹಿಸದ ಕೆಲ ಸದಸ್ಯರು ಅಧ್ಯಕ್ಷ ಸ್ಥಾನದಿಂದ ಇಳಿಸಲು ಪ್ರಯತ್ನಪಟ್ಟರು. ಅದಕ್ಕೆ ಮಾಜಿ ಸಚಿವರು ಕುಮ್ಮಕ್ಕು ನೀಡುತ್ತಿದ್ದಾರೆ ಎಂದು ಆರೋಪಿಸಿದರು.

ಸದಸ್ಯ ಜಿ. ಶಾಂತಕುಮಾರ್ ಹಾಗು ಇತರ ಎಂಟು ಸದಸ್ಯರು ಅವಿಶ್ವಾಸ ನಿರ್ಣಯಕ್ಕೆ ಮುಂದಾಗಿದ್ದು, ಸಭೆಯಲ್ಲಿ ವಿನಾಕಾರಣ ಗೊಂದಲ ಸೃಷ್ಟಿಸಿ ಮುಖ್ಯಾಧಿಕಾರಿಯನ್ನು ಮನಬಂದಂತೆ ಎಳೆದಾಡಿದರಲ್ಲದೆ ಹಲ್ಲೆ ನಡೆಸಿದ್ದಾರೆ. ಈ ಸಂಬಂಧ ನಾನೇ ಬೇಲೂರು ಪೊಲೀಸರಿಗೆ ದೂರು ನೀಡಿರುವೆ, ಕೆಲ ಒತ್ತಡದಿಂದ ಎಫ್‌ಐಆರ್ ಮಾಡಿಲ್ಲ ಎಂದರು.

ಬೇಲೂರಿನಲ್ಲಿ ಕಾಂಗ್ರೆಸ್ ಸರ್ವನಾಶಕ್ಕೆ ಬಿ. ಶಿವರಾಂ ಕಾರಣವಾಗಿದ್ದಾರೆ. ಈ ಬಗ್ಗೆ ಮುಖ್ಯಮಂತ್ರಿ ಮತ್ತು ಕೆಪಿಸಿಸಿ ಅಧ್ಯಕ್ಷರಿಗೆ ದೂರು ನೀಡಲಾಗುವುದು ಎಂದರು.

# ಅರಕಲಗೂಡು ಅಭಿವೃದ್ಧಿಗೆ 8 ಕೋಟಿ ರೂ.



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಕಳೆದ ನಾಲ್ಕು ವರ್ಷಗಳ ಅವಧಿಯಲ್ಲಿ ಅರಕಲಗೂಡು ತಾಲ್ಲೂಕಿಗೆ ಅಂದಾಜು 8 ಕೋಟಿ ರೂ. ಅನುದಾನ ನೀಡಲಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಡಾ. ಸೂರಜ್ ರೇವಣ್ಣ ತಿಳಿಸಿದರು.

ತಾಲ್ಲೂಕಿನ ಗಂಜಲಗೂಡು, ಹುಲ್ಲಂಗಾಲ, ಬಸವನಹಳ್ಳಿ, ಬೈಚನಹಳ್ಳಿ ಮತ್ತು ಮರವಳಲು ಗ್ರಾಮದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ವಾರ್ಷಿಕವಾಗಿ ಅರಕಲಗೂಡು ತಾಲ್ಲೂಕಿಗೆ ವಿಧಾನ ಪರಿಷತ್ ಅನುದಾನದಲ್ಲಿ ಪ್ರತಿವರ್ಷವೂ 55 ಲಕ್ಷ ರೂ. ನೀಡಲಾಗುತ್ತಿದೆ. ಅದೇ ರೀತಿ ಮಲೆನಾಡು ಅಭಿವೃದ್ಧಿ ಮಂಡಳಿ, ನೀರಾವರಿ, ಜಿಲ್ಲಾ ಪಂಚಾಯಿತಿ ಮತ್ತು ಲೋಕೋಪಯೋಗಿ ಇಲಾಖೆಯಡಿ ಅನುದಾನ ಬಳಕೆ ಮಾಡಿಕೊಂಡಿಯೂ ಕೂಡ ಗ್ರಾಮ ಪರಿಮಿತಿಯಲ್ಲಿ ರಸ್ತೆ, ಚರಂಡಿ, ದೇವಸ್ಥಾನಗಳ ಅಭಿವೃದ್ಧಿ, ಸಮುದಾಯ ಭವನದ ಅವಶ್ಯ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ವಾರ್ಷಿಕ 2 ಕೋಟಿ ರೂ. ಅನುದಾನ ಬರುತ್ತದೆ. ಆ ಪೈಕಿ 55ಲಕ್ಷ ರೂ.ಗಳನ್ನು ಅರಕಲಗೂಡಿಗೆ ನೀಡಲಾಗುತ್ತಿದೆ. ಒಂದು ಸಮಾಜದವರ ಕಲ್ಯಾಣಕ್ಕೆ ಅನುದಾನ ಮೀಸಲಿಡದೆ ಎಲ್ಲಾ ವರ್ಗದವರು ವಾಸಿಸುವ ಗ್ರಾಮಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು, ದೇವಾಲಯ ಜೀರ್ಣೋದ್ಧಾರ, ಸಮುದಾಯ ಭವನಗಳ ಅಡುಗೆ ಕೋಣೆ ಅಭಿವೃದ್ಧಿ ಹಾಗೂ ಗ್ರಾಮ ಪರಿಮಿತಿಯಲ್ಲಿ ಕಾಂಕ್ರೀಟ್ ರಸ್ತೆ, ಚರಂಡಿ ನಿರ್ಮಾಣಕ್ಕೆ ಒತ್ತು ನೀಡಲಾಗಿದೆ. ಹಲವು ಗ್ರಾಮಗಳಿಂದ ಅಭಿವೃದ್ಧಿ ಕುರಿತು ಮನವಿ ಬಂದಿದ್ದು, ಆದ್ಯತೆ ಮೇರೆಗೆ ಅನುದಾನ ಕಲ್ಪಿಸುವ ಭರವಸೆಯನ್ನು ಅವರು ನೀಡಿದರು.

ಗ್ರಾಪಂ ಅಧ್ಯಕ್ಷೆ ಮಂಜಮ್ಮ, ಸದಸ್ಯೆ ತುಳಸಿ, ತಾಪಂ ಮಾಜಿ ಅಧ್ಯಕ್ಷ ಯೋಗೇಶ್, ಮುಖಂಡರಾದ ದಿವಾಕರ್, ಕಳ್ಳಿಮುದ್ದನಹಳ್ಳಿ ವಿಜಯ್‌ಕುಮಾರ್, ರಘು ಇತರರು ಹಾಜರಿದ್ದರು.

# ಪಾಕಿಸ್ತಾನಕ್ಕೆ ತಕ್ಕ ಶಾಸ್ತಿ ಕಲಿಸಿ: ಮಾಜಿ ಸೈನಿಕರ ಒತ್ತಾಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಪದೇ ಪದೆ ಉಗ್ರವಾದದ ಮೂಲಕ ಭಾರತವನ್ನು ಕೆಣಕುತ್ತಿರುವ ಪಾಕಿಸ್ತಾನಕ್ಕೆ ಭಾರತ ಸರ್ಕಾರ ತಕ್ಕ ಶಾಸ್ತಿ ಮಾಡಬೇಕು. ಆ ಮೂಲಕ ಭಯೋತ್ಪಾದನಾ ಚಟುವಟಿಕೆಗಳಿಗೆ ಬ್ರೇಕ್ ಹಾಕಬೇಕು ಎಂದು ತಾಲ್ಲೂಕು ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಧರ್ಮರಾಜ್ ಹೇಳಿದರು.



ತಾಲ್ಲೂಕಿನ ಕೊರಟಿಕೆರೆ ಗ್ರಾಮದ ಶ್ರೀ ಶಂಭುಲಿಂಗೇಶ್ವರ ದೇಗುಲದ ವಾರ್ಷಿಕ ಪೂಜಾ ಕಾರ್ಯಕ್ರಮ ಮತ್ತು ಹುಣಿಮೆ ದಿನದ ಅಂಗವಾಗಿ ನಿವೃತ್ತ ಸೈನಿಕರಿಗೆ ಅಭಿನಂದನೆ ಮತ್ತು ಅಪರೇಷನ್ ಸಿಂದೂರ ಯಶಸ್ವಿ ಕಾರ್ಯಕ್ರಮದಲ್ಲಿ ಮಾತನಾಡಿ, ಧರ್ಮದ ಹೆಸರಿನಲ್ಲಿ ರಾಜಕಾರಣ ಮಾಡುವ ನೀಚ ಕೆಲಸಕ್ಕೆ ಮುಂದಾಗಿರುವ ಪಾಕಿಸ್ತಾನ ನಮಗೆ ಆ ಜನ್ಮದ ವೈರಿಯೇ ಸರಿ. ಇಂತಹ ಕುತಂತ್ರದ ದೇಶಕ್ಕೆ ಕೆಲ ರಾಷ್ಟ್ರಗಳು ಬೆಂಬಲ ನೀಡುತ್ತಾ ಬಂದಿವೆ. ವಿಶ್ವದಲ್ಲಿ ಭಾರತ ಮತ್ತು ಪಾಕಿಸ್ತಾನ ಕದನ ವಿರಾಮ ನೀಡಬೇಕು ಎನ್ನುವ ನಾಲ್ಕು ಗಂಟೆಯಲ್ಲಿಯೇ ಭಾರತದ ಮೇಲೆ ದಾಳಿ ನಡೆಸುವ ಪಾಕಿಸ್ತಾನಕ್ಕೆ ಯುದ್ಧದ ಮೂಲಕವೇ ಉತ್ತರ ನೀಡಬೇಕು ಹೊರತು ಯಾವ ಕಾರಣಕ್ಕೂ ಮೋದಿಯವರು ಸಂಧಾನಕ್ಕೆ ಒಪ್ಪಬಾರದು, ಪಾಕಿಸ್ತಾನದಲ್ಲಿ ಇಂದಿಗೂ ಉಗ್ರವಾದ ಜೀವಂತವಾಗಿದೆ. ಅಲ್ಲಿಯ ಸರ್ಕಾರಗಳು ಕೂಡ ಬೆಂಬಲ ನೀಡುತ್ತಾ ಪ್ರೋತ್ಸಾಹ ನೀಡುತ್ತಿದ್ದಾರೆ. ಭಯೋತ್ಪಾದನೆ ವಿಶ್ವಕ್ಕೆ ಅಂಟಿದ ರೋಗ. ನಮ್ಮ ಸೈನಿಕರು ಸಶಕ್ತರಾಗಿದ್ದಾರೆ. ಅವರಿಗೆ ಒಂದು ಕರೆಯನ್ನು ನೀಡಿ ಪಾಪಿ ಪಾಕಿಸ್ತಾನವನ್ನು ಭೂಪಟದಿಂದ ಕಿತ್ತು ಹಾಕುತ್ತಾರೆ, ನಿವೃತ್ತ ಸೈನಿಕರ ಶಕ್ತಿ ಇನ್ನು ಕುಂದಿಲ್ಲ ಅಗತ್ಯವಿದ್ದರೆ ನಾವುಗಳು ಕೂಡ ದೇಶ ಸೇವೆಯಲ್ಲಿ ಭಾಗವಹಿಸಲು ಸಿದ್ದವೆಂದರು.

ತಾಲ್ಲೂಕು ವೀರಶೈವ ಲಿಂಗಾಯಿತ ಮಹಾಸಭಾ ಘಟಕದ ಖಜಾಂಚಿ ಕೇಬಲ್ ರಾಜಣ್ಣ ಮಾತನಾಡಿ, ಈ ಹಿಂದೆ ಕಾರ್ಗಿಲ್ ಯುದ್ಧ ನಡೆದ ಸಂದರ್ಭದಲ್ಲಿ ಸ್ವತಃ ಭಾಗವಹಿಸಿದ ವೀರ ಯೋಧರಿಗೆ ಅಭಿನಂದನೆ ಸಲ್ಲಿಸಲಾಗಿದೆ. ದೇಶಕ್ಕೆ ಅನ್ನ ನೀಡುವ ರೈತ ಮತ್ತು ನಿತ್ಯ ಮಳೆ,ಚಳಿ, ಹಗಲು ರಾತ್ರಿ ಎನ್ನದೆ ದೇಶ ಕಾಯುವ ಸೈನಿಕರು ದೇಶದ ಎರಡು ಕಣ್ಣುಗಳು, ಇವರನ್ನು ಅಭಿನಂದಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಪಾಕಿಸ್ತಾನದ ನರಿಬುದ್ದಿಗೆ ತಕ್ಕ ಉತ್ತರ ನೀಡಬೇಕು ಇಲ್ಲವಾದರೆ ದೇಶದಲ್ಲಿ ಅಂತರೀಕ ಭಯೋತ್ಪಾದನಾ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಸಾಧ್ಯವಿಲ್ಲ ಎಂದರು.

ನಿವೃತ್ತ ಸೈನಿಕರಾದ ಉಮೇಶ್, ನಾಗಭೂಷಣ್, ಧರ್ಮರಾಜ್, ಮೋಹನ್ ಅವರನ್ನು ಅಭಿನಂದಿಸಲಾಯಿತು. ರೇಣುಕುಮಾರ್, ಯೋಗೀಶ್, ನಂಜುಂಡಪ್ಪ, ಮಹದೇವಯ್ಯ, ರಾಮೇಗೌಡ, ಸುಧಾ ಮಂಜುನಾಥ್ ಇತರರಿದ್ದರು.

# ಮಾರಮ್ಮ ದೇವಿ ದೇಗುಲ ಲೋಕಾರ್ಪಣೆ ಇಂದು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತಾಲ್ಲೂಕಿನ ಬಿಳಿಕೆರೆ ಕಾಲನಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀ ಮಾರಮ್ಮ ದೇವಿಯ ದೇಗುಲದ ಲೋಕಾರ್ಪಣೆ ಸಮಾರಂಭ ಮೇ 14 ರಂದು ನಡೆಯಲಿದೆ.

ಮೇ 13ರ ಮಂಗಳವಾರ ಗೋಧೂಳಿ ಲಗ್ನದಲ್ಲಿ ಗಂಗಾರ್ಪಣ, ಮಹಾ ತೀರ್ಥ ಸಂಗ್ರಹಣ, ಗಣಪತಿ ಪೂಜೆ, ಗೋಪೂಜೆ ಸಮೇತ ಮಂಗಳವಾದ್ಯ ವೇದ ಘೋಷದೊಂದಿಗೆ ಪುರ ಪ್ರವೇಶ, ಊರಿನ ಪ್ರಮುಖ ಬೀದಿಗಳಲ್ಲಿ ಗ್ರಾಮ ಪ್ರದಕ್ಷಣೆ, ಶ್ರೀ ಮಾರಮ್ಮ ದೇವಿಯ ದೇವಾಲಯ ಪ್ರವೇಶ, ಧ್ವಜಾರೋಹಣ ನಂತರ ಪಂಚಬ್ರಹ್ಮ, ನವಗ್ರಹ ಹೋಮ, ಮೃತ್ಯುಂಜಯ, ಸಪ್ತ ಸಭಾ ದೇವತಾ ಶ್ರೀ ಲಕ್ಷ್ಮಿನಾರಾಯಣ ಅಷ್ಟಲಕ್ಷ್ಮಿ ಸಕಲ ಪರಿವಾರ ದೇವತಾ ಪ್ರಧಾನ ಹೋಮ, ಲಘು ಪೂರ್ಣಾಹುತಿ ಜರುಗಲಿದ್ದು ತೀರ್ಥ ಪ್ರಸಾದ, ವಿನಿಯೋಗ ನೆರವೇರಿತು.



ಮೇ 14ರ ಬುಧವಾರ ಬೆಳಿಗ್ಗೆ 5.30ರ ಬ್ರಾಹ್ಮಿ ಲಗ್ನದಲ್ಲಿ ಶ್ರೀ ಮಾರಮ್ಮ ದೇವಿಯ ಪ್ರಾಣ ಪ್ರತಿಷ್ಠಾಪನೆ ಜರುಗಲಿದ್ದು ಅಮ್ಮನವರಿಗೆ ಪಂಚ ಅಭಿಷೇಕ, ವಿಶೇಷ ಅಲಂಕಾರ, ಗಣಹೋಮ, ಶ್ರೀ ಸೂಕ್ತ ಹೋಮ, ಶ್ರೀ ದುರ್ಗಾ ಪ್ರಧಾನ, ಚಂಡಿಕಾ ಹೋಮ, ದೃಷ್ಟಿ ಪೂಜೆ, ಕದಳಿ ಛೇದನ, ಶ್ರೀ ಮಾರಮ್ಮ ದೇವಿಗೆ ಸುಮಂಗಲಿಯರಿಂದ ಅಷ್ಟೋತ್ತರ ಕುಂಕುಮಾರ್ಚನೆ ಬಳಿಕ ಅನ್ನದಾಸೋಹ ಜರುಗಲಿದೆ.

ದೇಗುಲ ಲೋಕಾರ್ಪಣಾ ಕಾರ್ಯಕ್ರಮದಲ್ಲಿ ಗುಂಗರಮಳೆ ಗ್ರಾಮದೇವತೆ ಶ್ರೀ ಮಾರಮ್ಮ ದೇವಿ, ಶ್ರೀ ಉಚ್ಚಂಗಿ ಯಲ್ಲಮ್ಮ, ಶ್ರೀ ಧೂತರಾಯಸ್ವಾಮಿ, ಶ್ರೀ ಚಿಕ್ಕಮ್ಮ ದೇವಿ, ನೊಣವಿನಕೆರೆಯ ಶ್ರೀ ದುರ್ಗಮ್ಮ ಹಾಗೂ ಚಿಕ್ಕಹೊನ್ನವಳ್ಳಿ ಗ್ರಾಮದ ಶ್ರೀ ಧೂತರಾಯಸ್ವಾಮಿ ಪಾಲ್ಗೊಳ್ಳುವುದು ವಿಶೇಷವಾಗಿದೆ.

ಶಾಸಕ ಸಿ.ಎನ್. ಬಾಲಕೃಷ್ಣ ಸಮಾರಂಭ ಉದ್ಘಾಟಿಸಲಿದ್ದಾರೆ. ವಿಧಾನ ಪರಿಷತ್ ಮಾಜಿ ಶಾಸಕ ಎಂ.ಎ. ಗೋಪಾಲಸ್ವಾಮಿ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಕುಸುಮ ಬಾಲಕೃಷ್ಣ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಎಂ.ಆರ್. ವಾಸು, ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಎನ್.ಟಿ. ಬೊಮ್ಮೇಗೌಡ, ಕಬ್ಬಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಂಗಳಮ್ಮ ಹರೀಶ, ಉಪಾಧ್ಯಕ್ಷೆ ರತ್ನ ಕುಮಾರಸ್ವಾಮಿ, ಮಾಜಿ ಅಧ್ಯಕ್ಷ ಬಿಳಿಕೆರೆ ರಂಗೇಗೌಡ ಹಾಗೂ ಇತರು ಪಾಲ್ಗೊಳ್ಳಲಿದ್ದಾರೆ.

# ಪೌರ ಕಾರ್ಮಿಕರ ವಸತಿ ವ್ಯವಸ್ಥೆಗೆ ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪೌರ ಕಾರ್ಮಿಕರಿಗೆ ವಿಶ್ರಾಂತಿ ಗೃಹ ಸೌಲಭ್ಯ ಕಲ್ಪಿಸುವಂತೆ ಜಿಲ್ಲಾಧಿಕಾರಿ ಸಿ. ಸತ್ಯಭಾಮ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಮ್ಯಾನ್ಯುವಲ್ ಸ್ಕ್ಯಾವೆಂಜರ್‌ಗಳ ನಿಯೋಜನೆ ನಿಷೇಧ ಮತ್ತು ಅದರ ಪುನರ್ವಸತಿ ಅಧಿನಿಯಮ 2013ರ ಅನ್ವಯ ಜಿಲ್ಲಾ ಮಟ್ಟದ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ವಿಶ್ರಾಂತಿ ಗೃಹ ನಿರ್ಮಾಣಕ್ಕೆ ಸ್ಥಳ ಗುರುತಿಸಿ ಕಾಮಗಾರಿ ಪ್ರಾರಂಭಿಸಲು ಕ್ರಮ ವಹಿಸಬೇಕು. ಬಾಡಿಗೆ ಕಟ್ಟಡದಲ್ಲಿ ವಿಶ್ರಾಂತಿ ಗೃಹ ವ್ಯವಸ್ಥೆ ಮಾಡುವಂತೆ ತಿಳಿಸಿದರು.

ಪೌರಕಾರ್ಮಿಕರಿಗೆ ಗೃಹ ಭಾಗ್ಯ ಯೋಜನೆಯಡಿ ನಿವೇಶನ ಹಂಚಿಕೆಗೆ ಸಂಬಂಧಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಪೌರ ಕಾರ್ಮಿಕರಿಗೆ ಇಪಿಎಫ್ ಮತ್ತು ಪಿಎಫ್ ಹಣ ಪಾವತಿ ಆಗುತ್ತಿರುವ ಬಗ್ಗೆ ಪರಿಶೀಲನೆ ಮಾಡುವಂತೆ ಸೂಚಿಸಿದರು. ಪೌರ ಕಾರ್ಮಿಕರಿಗೆ ಸುರಕ್ಷಾ ಪರಿಕರಗಳನ್ನು ನೀಡಲಾಗಿದೆಯಾ ಅವುಗಳ ಬಳಕೆ ಮಾಡುತ್ತಿರುವ ಬಗ್ಗೆ ಪರಿಶೀಲನೆ ಮಾಡಲು ಸೂಚಿಸಿದರಲ್ಲದೆ,ವರ್ಷಕ್ಕೆ ಮೂರು ಬಾರಿ ಸುರಕ್ಷಾ ಪರಿಕರಗಳನ್ನು ನೀಡಬೇಕು. ನಗರಗಳಲ್ಲಿ ಸ್ವಚ್ಛತೆ ಕಾಪಾಡಲು ನಿಗಾವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಸಮಿತಿ ಸದಸ್ಯರಾದ ಶಂಕರ್ ರಾಜ್, ಪಳನಿ, ಭಾಸ್ಕರ್, ಶ್ರೀನಿವಾಸ್, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಪಿ. ದೂದ್‌ಪೀರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅನಿಲ್ ಮತ್ತಿತರರು ಹಾಜರಿದ್ದರು.

# ಅಂಡರ್ ಪಾಸ್, ಹೆಗ್ಗಡಿಹಳ್ಳಿ ಸೈ ವಾಕ್ ನಿರ್ಮಾಣಕ್ಕೆ ಒತ್ತಾಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತಾಲ್ಲೂಕಿನ ಹಿರೀಸಾವೆ ಸಮೀಪ ಬೂಕನಬೆಟ್ಟದ ಗೇಟ್ ಬಳಿ ಅಂಡರ್ ಪಾಸ್ ಹಾಗೂ ಹೆಗ್ಗಡಿಹಳ್ಳಿ ಗ್ರಾಮದ ಬಳಿ ಸೈ ವಾಕ್ ನಿರ್ಮಾಣ ಮಾಡುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವನ್ನು ಹೆಗ್ಗಡಿಹಳ್ಳಿ, ಚಿಕ್ಕೋನಹಳ್ಳಿ, ಬೂಕನಬೆಟ್ಟ ಸೇರಿದಂತೆ ಹಲವು ಗ್ರಾಮಸ್ಥರು ಒತ್ತಾಯಿಸಿದರು.



ರಾಷ್ಟ್ರೀಯ ಹೆದ್ದಾರಿ 75ರ ಚಿಕ್ಕೋನಹಳ್ಳಿ ಗೇಟ್ ಸಮೀಪ ಇರುವ ಖಾಸಗಿ ದೇವಸ್ಥಾನ ಶ್ರೀ ಸಾಯಿಬಾಬಾ ಮಂದಿರದ ಬಳಿ ಸೈವಾಕ್ ನಿರ್ಮಾಣ ಮಾಡಲು ಮುಂದಾಗಿದೆ. ಇದರಿಂದ ರಸ್ತೆ ಪಕ್ಕದ ಗ್ರಾಮಗಳ ಜನರಿಗೆ ಯಾವುದೇ ರೀತಿಯಲ್ಲಿ ಅನುಕೂಲ ಆಗುವುದಿಲ್ಲ. ಇದನ್ನು ರದ್ದುಪಡಿಸಬೇಕು. ಮುಜರಾಯಿ ಇಲಾಖೆಗೆ ಸೇರಿದ ಇತಿಹಾಸ ಪ್ರಸಿದ್ಧ ಬೂಕನಬೆಟ್ಟ ರಂಗನಾಥಸ್ವಾಮಿ ದೇವಾಲಯ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗೆ ಸಂಪರ್ಕ ರಸ್ತೆಗೆ ಅಂಡರ್ ಪಾಸ್ ನಿರ್ಮಾಣ ಮಾಡುವುದರಿಂದ ಭಕ್ತರಿಗೆ ಮತ್ತು ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ವಿವರಿಸಿದರು.

ಪ್ರತಿವರ್ಷ ಜನವರಿ ತಿಂಗಳಲ್ಲಿ ನಡೆಯುವ ಬೃಹತ್ ಜಾನುವಾರು ಜಾತ್ರೆಗೆ ಎತ್ತುಗಳನ್ನು ಎರಡು ಕಿ.ಮೀ ಸುತ್ತಿ ಬರಬೇಕಿದೆ. ಈ ಸ್ಥಳದಲ್ಲಿ ಅಂಡರ್ ಪಾಸ್ ನಿರ್ಮಾಣ ಮಾಡುವುದರಿಂದ ಸುತ್ತಮುತ್ತಲಿನ ಹತ್ತಾರು ಗ್ರಾಮಗಳ ಜನರು ಸುಗಮ ಸಂಚಾರ ಮಾಡುತ್ತಾರೆ ಎಂದು ತಿಳಿಸಿದರು.

ಹೆಗ್ಗಡಿಹಳ್ಳಿ ಮತ್ತು ಬೂಕನಬೆಟ್ಟದ ಗೇಟ್ ಬಳಿ ಆಗಾಗ ಅಪಘಾತಗಳು ಸಂಭವಿಸಿ ಪ್ರಾಣಹಾನಿ ಆಗಿವೆ. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಈ ಸ್ಥಳವನ್ನು ಅಪಘಾತ ವಲಯ ಎಂದು ಘೋಷಣೆ ಮಾಡಿ ರಸ್ತೆಯ ಎರಡು ಕಡೆ ಫಲಕವನ್ನು ಅಳವಡಿಸಿದ್ದಾರೆ. ಹೆಗ್ಗಡಿಹಳ್ಳಿ ಬಳಿ ಸೈವಾಕ್ ನಿರ್ಮಿಸುವುದು ಅಗತ್ಯವಿದೆ ಎಂದು ಒತ್ತಾಯಿಸಿದರು.

ಗ್ರಾಮ ಪಂಚಾಯಿತಿ ಸದಸ್ಯ ಕೃಷ್ಣಮೂರ್ತಿ, ಕರವೇ ಮಹೇಶ್, ಮಂಜುನಾಥ್ ಮಾತನಾಡಿದರು.

ಕಳೆದ ಎರಡು ದಿನದ ಹಿಂದೆ ಸಾಯಿಬಾಬಾ ಮಂದಿರದ ಬಳಿ ಹಿಂದೂಸ್ತಾನ್ ಕನ್‌ಸ್ಟ್ರಕ್ಷನ್ ಕಂಪನಿಯೂ ಸೈವಾಕ್ ನಿರ್ಮಾಣಕ್ಕೆ ಕಾಮಗಾರಿ ಆರಂಭಿಸಲು ಮುಂದಾಗಿತ್ತು. ಸ್ಥಳೀಯರು ವಿರೋಧ ವ್ಯಕ್ತಪಡಿಸಿದ್ದರಿಂದ ಸದ್ಯಕ್ಕೆ ಕೆಲಸ ಸ್ಥಗಿತವಾಗಿದೆ. ಸೋಮವಾರ ಹಿರೀಸಾವೆ ವೃತ್ತ ನಿರೀಕ್ಷಕರ ಕಚೇರಿಯಲ್ಲಿ ಮನವಿ ಪತ್ರವನ್ನು ಅಧಿಕಾರಿಗಳಿಗೆ ಸಲ್ಲಿಸಿದರು.

# ಇತಿಹಾಸದಲ್ಲಿ ಈ ದಿನ

## ಮೇ -14

**1607:** ಇಂಗ್ಲೆಂಡ್‌ನಿಂದ ಅಮೇರಿಕಾಗೆ ಬಂದವರಿಂದ ಜೇಮ್ಸ್ ಟೌನ್ ಸ್ಥಾಪನೆಯಾಯಿತು. ಉತ್ತರ ಅಮೇರಿಕಾದಲ್ಲಿನ ಮೊದಲ ಇಂಗ್ಲಿಷ್ ಕಾಲನಿಯಾಗಿದೆ.

**1796:** ಎಡ್ವರ್ಡ್ ಜೆನ್ನರ್ ಮೊದಲ ಬಾರಿ ತೋಲುಕಜ್ಜಾಯಿಗೆ ವಿರುದ್ಧ ಲಸಿಕೆ ಪ್ರಯೋಗವನ್ನು ಯಶಸ್ವಿಯಾಗಿ ನಡೆಸಿದರು.

**1940:** ದ್ವಿತೀಯ ವಿಶ್ವಯುದ್ಧ: ನೆದರ್‌ಲ್ಯಾಂಡ್ಸ್ (ಹಾಲೆಂಡ್) ನಾಜಿ ಜರ್ಮನಿಗೆ ಶರಣಾದರು.

**1948:** ಇಸ್ರೇಲ್ ದೇಶ ತನ್ನ ಸ್ವಾತಂತ್ರ್ಯವನ್ನು ಘೋಷಿಸಿತು.

**1973:** ಅಮೇರಿಕಾದಲ್ಲಿ ಸ್ಕೈಲ್ಯಾಬ್: ಮೊದಲ ಬಾರಿಗೆ ಬಾಹ್ಯಾಕಾಶ ನಿಲ್ದಾಣವನ್ನು ಉಡಾವಣೆ ಮಾಡಲಾಯಿತು.

### ಜನನ

**1923:** ಮೃಣಾಲ್ ಸೇನ್, ಖ್ಯಾತ ಭಾರತೀಯ ಚಲನಚಿತ್ರ ನಿರ್ದೇಶಕ.

**1931:** ಕಸ್ತೂರಿರಂಗನ್, ಭಾರತೀಯ ಬಾಹ್ಯಾಕಾಶ ವಿಜ್ಞಾನಿ.

**1944:** ಜಾರ್ಜ್ ಲೂಕಾಸ್, ಸ್ಟಾರ್ ವಾರ್ಸ್ ಚಲನಚಿತ್ರ ಮಾಲಿಕೆಯ ನಿರ್ಮಾಪಕ ಹಾಗೂ ನಿರ್ದೇಶಕ.

**1953:** ನೊರ್ ಹ್ಯಾಮ್ಮದ್, ಜೋರ್ಡಾನ್‌ನ ರಾಣಿ.

### ಮರಣ

**1610:** ಹ್ಯಾನ್ರಿ , ಫ್ರಾನ್ಸ್‌ನ ರಾಜ.

**1998:** ಫ್ರ್ಯಾಂಕ್ ಸೈನಾತ್ರಾ, ಅಮೇರಿಕಾದ ಪ್ರಸಿದ್ಧ ಗಾಯಕ ಮತ್ತು ನಟ.

**2015:** ಬಿ.ಬಿ. ಕಿಂಗ್, ಅಮೇರಿಕಾದ ಬ್ಲೂಸ್ ಗಾಯಕ ಮತ್ತು ಗಿಟಾರ್ ವಾದಕ.

# ಜಿಲ್ಲೆಗೆ ನಾಳೆ ಉಪ ಲೋಕಾಯುಕ್ತರ ಭೇಟಿ

ಹಾಸನ: ಉಪ ಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು ಮೇ 15 ರಿಂದ 17ರ ವರೆಗೆ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಮೂರು ದಿನಗಳ ಪ್ರವಾಸದಲ್ಲಿ ಸಾರ್ವಜನಿಕರ ಅಹವಾಲು ಸ್ವೀಕಾರ, ಬಾಕಿ ಇರುವ ಅರ್ಜಿ ವಿಚಾರಣೆ ಹಾಗೂ ವಿಲೇವಾರಿ ನಡೆಸಲಿದ್ದಾರೆ. ಜಿಲ್ಲಾ ನ್ಯಾಯಾಧೀಶರಾದ ಪೃಥ್ವಿರಾಜ್ ವರ್ನೇಕರ್, ನಿವೃತ್ತ ನ್ಯಾಯಾಧೀಶ ಬಿ. ಶುಭವೀರ, ಸಿವಿಲ್ ನ್ಯಾಯಾಧೀಶ ಕಿರಣ್ ಪಾಟೀಲ್ ಅವರು ಪಾಲ್ಗೊಳ್ಳಲಿದ್ದಾರೆ.

ಮೇ 15ರ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30 ಹಾಗೂ ಮಧ್ಯಾಹ್ನ 2.30 ರಿಂದ 5 ಗಂಟೆ ವರೆಗೆ ಹಾಸನಾಂಬ ಕಲಾಕ್ಷೇತ್ರದಲ್ಲಿ ಸಾರ್ವಜನಿಕರ ದೂರು ಸ್ವೀಕರಿಸುವರು. ಮೇ 16ರ ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30ರ ವರೆಗೆ ಮತ್ತು ಮಧ್ಯಾಹ್ನ 2.30 ರಿಂದ 5ರ ವರೆಗೆ ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಜಿಲ್ಲೆಗೆ ಸಂಬಂಧಿಸಿದಂತೆ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ ಪ್ರಕರಣಗಳಿಗೆ ಸಂಬಧಿಸಿದ ದೂರುದಾರರು ಹಾಗೂ ಎದುರುದಾರರ ಸಮ್ಮುಖದಲ್ಲಿ ವಿಚಾರಣೆ ನಡೆಸಲಾಗುವುದು.

ಮೇ 17ರ ಬೆಳಿಗ್ಗೆ 9 ರಿಂದ 10 ಗಂಟೆಯವರೆಗೆ ಜಿಲ್ಲಾ ನ್ಯಾಯಾಲಯದ ಕಾನ್ಫರೆನ್ಸ್ ಹಾಲ್‌ನಲ್ಲಿ ನ್ಯಾಯಾಧಿಶರಿಗೆ ಸಾರ್ವಜನಿಕ ಆಡಳಿತದಲ್ಲಿ ಲೋಕಾಯುಕ್ತ ಸಂಸ್ಥೆ ಮತ್ತು ಕಾನೂನು ಸೇವೆಗಳ ಪ್ರಾಧಿಕಾರದ ಪಾತ್ರದ ಕುರಿತು ಸಭೆ ನಡೆಸಲಿದ್ದಾರೆ. ಬೆ. 10.30 ರಿಂದ 11.30ರ ವರೆಗೆ ಪ್ರವಾಸಿ ಮಂದಿರದಲ್ಲಿ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸುವರು. ಮಧ್ಯಾಹ್ನ 12 ರಿಂದ 2 ಗಂಟೆ ವರೆಗೆ ಹಾಗು ಮಧ್ಯಾಹ್ನ 3 ರಿಂದ 6 ಗಂಟೆವರೆಗೆ ಜಿಲ್ಲೆಯ ತಾಲ್ಲೂಕುಗಳಿಗೆ ಸಾರ್ವಜನಿಕ ಕಚೇರಿ, ಸಂಸ್ಥೆಗಳಿಗೆ ಅನಿರೀಕ್ಷಿತ ಭೇಟಿ ನೀಡಲಿದ್ದಾರೆ.

# ನಗದು ಸೇರಿ 16.50 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳವು

ಹಾಸನ: ನಗರದ ಶಂಕರೀಪುರಂನ ರಿಯಲ್ ಎಸ್ಟೇಟ್ ಉದ್ಯಮಿ ಮನೆಗೆ ನುಗ್ಗಿರುವ ಕಳ್ಳರು 10.40 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಹಾಗೂ 6.11 ಲಕ್ಷ ರೂ. ನಗದು ಕದ್ದಿದ್ದಾರೆ. ರಿಯಲ್ ಎಸ್ಟೇಟ್ ಉದ್ಯಮಿ ಬಿ. ಮಧು ಅವರ ಮನೆಯಲ್ಲಿ ಮೇ 11ರ ರಾತ್ರಿ ಕಳ್ಳತನ ನಡೆದಿದೆ. ಬೀಗರ ಔತಣಕೂಟ ಹಿನ್ನಲೆಯಲ್ಲಿ ಮಧು ಮನೆಗೆ ಬೀಗ ಹಾಕಿ ಕುಟುಂಬ ಸಮೇತ ಹೊಳೆನರಸೀಪುರ ತಾಲ್ಲೂಕು ಮಾಕವಳ್ಳಿ ಗ್ರಾಮಕ್ಕೆ ತೆರಳಿದ್ದರು. ಮಾರನೇ ದಿನ ಮನೆಗೆ ಬಂದು ನೋಡಿದಾಗ ಹಿಂಬಾಗಿಲು ಮುರಿದಿರುವುದು ತಿಳಿದಿದೆ. ಬೀರುವಿನಲ್ಲಿಟ್ಟಿದ್ದ 2 ಗ್ರಾಂ ತೂಕದ 3 ಚಿನ್ನದ ಕಾಯಿನ್, 5 ಗ್ರಾಂ ತೂಕದ ಒಂದು ಚಿನ್ನದ ಕಾಯಿನ್, 46 ಗ್ರಾಂ ತೂಕದ 4 ಚಿನ್ನದ ಬಳೆ, 12 ಗ್ರಾಂ ತೂಕದ ಚಿನ್ನದ ಚೈನ್, 13 ಗ್ರಾಂ ತೂಕದ ಚಿನ್ನದ ಉಂಗುರ, 20 ಗ್ರಾಂ ತೂಕದ ಚಿನ್ನದ ನೆಕ್ಲೇಸ್, 2 ಗ್ರಾಂ ತೂಕದ ಮಕ್ಕಳ ಚಿನ್ನದ ಕೊಂಡಲಿ, 6 ಗ್ರಾಂ ತೂಕದ 3 ಚಿಕ್ಕ ಚಿನ್ನದ ಉಂಗುರ, 20 ಗ್ರಾಂ ತೂಕದ ಒಂಬತ್ತು ಹರಳಿನ ಚಿನ್ನದ ಉಂಗುರ, 20 ಗ್ರಾಂ ತೂಕದ ಚಿನ್ನದ ಕೈಬಳೆ, 10 ಗ್ರಾಂ ತೂಕದ ಚಿನ್ನದ ಉಂಗುರ, 20 ಗ್ರಾಂ ತೂಕದ 2 ಜೊತೆ ಚಿನ್ನದ ಓಲೆ, 450 ಗ್ರಾಂ ತೂಕದ ಬೆಳ್ಳಿಯ 2 ಚೊಂಬು, 200 ಗ್ರಾಂ ತೂಕದ ಬೆಳಿ ದೀಪ, 300 ಗ್ರಾಂ ತೂಕದ ಎರಡು ಜೊತೆ ಬೆಳ್ಳಿಯ ಕುಂಕುಮದ ಬಟ್ಟಲು, 150 ಗ್ರಾಂ ತೂಕದ ಬೆಳ್ಳಿಯ ಕೀ ಚೈನ್, 150 ಗ್ರಾಂ ತೂಕದ ಬೆಳ್ಳಿಯ ಒಂದು ಲೋಟ ಹಾಗೂ 6.11 ಲಕ್ಷ ರೂ. ಜೊತೆಗೆ ಪರಾರಿಯಾಗಿದ್ದಾರೆ. ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201
and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248